ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಸಂಖ್ಯೆ: ಪಮೂಶಿಇ/ಪರೀಕ್ಷೆ/ವಾ.ಪ.ಮ.ಅ.ದಿ.ವಿ/01/2021-22 ದಿನಾಂಕ: 10/12/2021

## ಸುತ್ತೋಲೆ

ವಿಷಯ: 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: ಪಮೂಶಿಇ/ಪರೀಕ್ಷೆ/ವಾ.ಪ.ಮ.ಅ/2021-22 ದಿನಾಂಕ: 30-10-2021.

ಮೇಲ್ಕಂಡ ವಿಷಯ ಹಾಗೂ ಉಲ್ಲೇಖದನ್ವಯ 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ವಿದ್ಯಾರ್ಥಿಗಳು ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಉಲ್ಲೇಖಿತ ಸುತ್ತೋಲೆಯಲ್ಲಿ 09-12-2021 ರವರೆಗೆ 500/- ರೂ ದಂಡಶುಲ್ಕದೊಂದಿಗೆ ಅವಕಾಶ ನೀಡಲಾಗಿತ್ತು. ಆದರೆ ಪೋಷಕರು ಹಾಗೂ ವಿದ್ಯಾರ್ಥಿಗಳ ದೂರವಾಣಿ ಕರೆಯ ಮನವಿಯ ಮೇರೆಗೆ ಸದರಿ ಪರೀಕ್ಷೆಗೆ ಶುಲ್ಕ ಪಾವತಿಸುವ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಿ ಆದೇಶಿಸಲಾಗಿದೆ.

| ಕ್ರ.ಸಂ | ವಿವರ | ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ದಿನಾಂಕ | ಕಾಲೇಜಿನವರು ಶುಲ್ಕವನ್ನು ಖಜಾನೆಗೆ ಸಂದಾಯ ಮಾಡುವ ದಿನಾಂಕ | ಕಾಲೇಜಿನವರು ಅರ್ಜಿಗಳನ್ನು Online ನಲ್ಲಿ ಭರ್ತಿಮಾಡಲು ಕಡೇ ದಿನಾಂಕ | ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಅರ್ಜಿಗಳನ್ನು ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 1. | ಶುಲ್ಕದ ಜೊತೆಗೆ ದಂಡಶುಲ್ಕ 500/- ರೂಗಳು | 10-12-2021 ರಿಂದ 01-01-2022 | 03-01-2022 | 03-01-2022 | 05-01-2022 |

ಜಿಲ್ಲಾ ಉಪನಿರ್ದೇಶಕರು ಪ್ರಾಂಶುಪಾಲರಿಂದ ಸ್ವೀಕರಿಸಿದ ಅರ್ಜಿಗಳನ್ನು SATS PORTAL ನಲ್ಲಿ Update ಮಾಡಿರುವುದನ್ನು ಖಾತ್ರಿ ಪಡಿಸಿಕೊಂಡು, ಭರ್ತಿಮಾಡಿದ OMR/MCA, ಶುಲ್ಕ ಪಾವತಿಸಿದ ವಿದ್ಯಾರ್ಥಿಗಳ ಕ್ರೋಢೀಕೃತ ಪಟ್ಟಿ, ಶುಲ್ಕ ಪಾವತಿಸಿದ ಮೂಲ ಚಲನ್ ಮತ್ತು ಚೆಕ್‌ಲಿಸ್ಟ್‌ನ್ನು ಖುದ್ದಾಗಿ ಕೇಂದ್ರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ: 07-01-2022.

10/12/2021
ನಿರ್ದೇಶಕರು(ಪರೀಕ್ಷೆ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ. (ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು).
2. ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ. (ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು).
3. ಸಹಾಯಕ ನಿರ್ದೇಶಕರು, ಗಣಕಶಾಖೆ, ಪ.ಪೂ.ಶಿ.ಇಲಾಖೆ.
4. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಪ.ಪೂ.ಶಿ.ಇಲಾಖೆ. (ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).
5. ಕಛೇರಿ ಪ್ರತಿ.

PRINCIPAL
S…NDHI PRE-UNIVERSITY COLLEGE
…68, Chokkanahalli, Thanisandra Main Road,
Yelahanka, Bengaluru-560 064.